**All India Radio: Bangalore**
**Regional Bulletin In Kannada**
**06.07.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**06.07.2025 / 6.40 p.m.**
**<><><><>**

ಮುಖ್ಯಾಂಶಗಳು :

1. ರಾಜ್ಯದಲ್ಲಿ ಒಳಮೀಸಲಾತಿ ಜಾರಿಯಾಗುವವರೆಗೆ ನೇಮಕಾತಿ ಹಾಗೂ ಮುಂಬಡ್ತಿ ಇಲ್ಲ - ಗೃಹ ಸಚಿವ ಡಾ.ಜಿ.ಪರಮೇಶ್ವರ್
2. ಒಬಿಸಿ ಸಲಹಾಮಂಡಳಿ ಸದಸ್ಯರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯಗೆ ಸ್ಥಾನ - ಮುಖ್ಯಮಂತ್ರಿ ಸಚಿವಾಲಯ ಸ್ಪಷ್ಟನೆ
3. ರಾಜ್ಯದಲ್ಲಿ ಹೃದಯಘಾತಕ್ಕೆ ಕೋವಿಡ್ ಲಸಿಕೆ ಕಾರಣವಲ್ಲ - ಮುಖ್ಯಮಂತ್ರಿ ವಿಜ್ಞಾನಿಗಳ ಕ್ಷಮೆ ಯಾಚಿಸುವಂತೆ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆಗ್ರಹ
4. ದರಕಾಸ್ತು ಪೋಡಿ ಆಂದೋಲನದಲ್ಲಿ ಹಾಸನ ಜಿಲ್ಲೆಗೆ ಪ್ರಥಮ ಸ್ಥಾನ

<><><><>

ರಾಜ್ಯದಲ್ಲಿ ಒಳ ಮೀಸಲಾತಿ ಜಾರಿ ಮಾಡಲು ಸರ್ಕಾರ ಬದ್ಧವಾಗಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಒಳಮೀಸಲಾತಿ ಜಾರಿ ಮಾಡಿಯೇ ತೀರುತ್ತದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ತುಮಕೂರಿನಲ್ಲಿ ನಡೆದ ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ್ ರಾಮ್ ಪುಣ್ಯಸ್ಮರಣೆಯ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ಮಾತನಾಡಿದ ಅವರು, ರಾಜ್ಯದಲ್ಲಿ ೨ ಲಕ್ಷ ೫೦ ಸಾವಿರ ಹುದ್ದೆಗಳು ನೇಮಕವಾಗಬೇಕಿದೆ. ಪೊಲೀಸ್ ಇಲಾಖೆಯಲ್ಲಿ ೧೮ ಸಾವಿರ ಹುದ್ದೆಗಳು ಖಾಲಿ ಇವೆ. ಕಾರಾಗೃಹದಲ್ಲಿ ಶೇಕಡ ೩೮ರಷ್ಟು ಹುದ್ದೆಗಳು ಖಾಲಿ ಇವೆ. ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆಯಲ್ಲಿ ನೇಮಕಾತಿ ನಡೆಯಬೇಕಿದೆ. ಒಳ ಮೀಸಲಾತಿ ತೀರ್ಮಾನ ಆಗುವವರೆಗು ನೇಮಕಾತಿ ಹಾಗೂ ಮುಂಬಡ್ತಿ ನೀಡುವುದಿಲ್ಲ ಎಂಬ ಕಠಿಣ ನಿರ್ಧಾರವನ್ನು ರಾಜ್ಯ ಸರ್ಕಾರ ತೆಗೆದುಕೊಂಡಿದೆ ಎಂದು ತಿಳಿಸಿದ್ದಾರೆ.

<><><><>

ದೇಶದಲ್ಲಿ ಇತರ ಹಿಂದುಳಿದ ಜಾತಿ-ಒಬಿಸಿ ಪಟ್ಟಿಯಲ್ಲಿರುವ ಸಮುದಾಯಗಳು ಎದುರಿಸುತ್ತಿರುವ ವಿವಿಧ ಸಮಸ್ಯೆಗಳನ್ನು ಪರಿಶೀಲಿಸಿ ಪರಿಹಾರ ಒದಗಿಸುವ ಉದ್ದೇಶದಿಂದ ಎಐಸಿಸಿ ರಚಿಸಿರುವ ಒಬಿಸಿ ಸಲಹಾ ಮಂಡಳಿ ಸದಸ್ಯರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಒಬ್ಬರು ಎಂದು ಮುಖ್ಯಮಂತ್ರಿ ಸಚಿವಾಲಯ ಸ್ಪಷ್ಟನೆ ನೀಡಿದೆ. ಸಲಹಾ ಮಂಡಳಿಯ ಸಭೆ ಇದೇ ೧೫ರಂದು ಎಐಸಿಸಿ ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಡಾ.ಅನಿಲ್ ಜೈಹಿಂದ್ ಅಧ್ಯಕ್ಷತೆಯಲ್ಲಿ ಬೆಂಗಳೂರಿನಲ್ಲಿ ನಡೆಯಲಿದೆ. ಸಭೆಯ ಆತಿಥ್ಯವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವಹಿಸಿಕೊಂಡಿದ್ದಾರೆ ಎಂದು ಸಚಿವಾಲಯ ತಿಳಿಸಿದೆ.

<><><><>

ರಾಜ್ಯದಲ್ಲಿ ಹೃದಯಾಘಾತಕ್ಕೂ ಕೋವಿಡ್ ಲಸಿಕೆಗೂ ಸಂಬಂಧವಿಲ್ಲ ಎಂದು ರಾಜ್ಯ ಸರ್ಕಾರ ನೇಮಿಸಿದ ತಜ್ಞರ ಸಮಿತಿಯೇ ವರದಿ ಸಲ್ಲಿಸಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಹೃದಯಾಘಾತ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸದೆ, ಕೋವಿಡ್ ಲಸಿಕೆಯೇ ಇದಕ್ಕೆ ಕಾರಣ ಎಂಬ ಮುಖ್ಯಮಂತ್ರಿ ಹೇಳಿಕೆ ಸರಿಯಲ್ಲ. ಅವರು ದೇಶದ ಮತ್ತು ವಿಜ್ಞಾನಿಗಳ ಸಮೂಹದ ಕ್ಷಮೆಯಾಚಿಸಬೇಕೆಂದು ಆಗ್ರಹಿಸಿದ್ದಾರೆ.

**ಧ್ವನಿ : ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ( ೩೧ ಸೆಕೆಂಡುಗಳು)**

<><><>

ದರಕಾಸ್ತು ಪೋಡಿ ಆಂದೋಲನದಲ್ಲಿ ಹಾಸನ ಜಿಲ್ಲೆ ಪ್ರಥಮ ಸ್ಥಾನ ಪಡೆದುಕೊಂಡಿದೆ, ಇದಕ್ಕೆ ಶ್ರಮವಹಿಸಿದ ಎಲ್ಲರಿಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ. ಎನ್ ರಾಜಣ್ಣ ಅಭಿನಂದನೆ ಸಲ್ಲಿಸಿದ್ದಾರೆ. ಹಾಸನ ಜಿಲ್ಲೆಯ ಚನ್ನರಾಯಪಟ್ಟಣದಲ್ಲಿ ಇಂದು ಇ - ಪೌತಿ ಖಾತೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಎರಡು ತಲೆಮಾರಿನ ರೈತರು ಖಾತೆ ಮಾಡಿಸಲು ಆಗದೆ ಅನೇಕ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದರು ಇದೀಗ ಇ - ಪೌತಿಖಾತೆ ಮಾಡಲು ಸರ್ಕಾರ ಮುಂದಾಗಿದ್ದು ಜನರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ. ಜಿಲ್ಲೆಯಲ್ಲಿ ೨೦ ಲಕ್ಷ ಸರ್ವೆ ನಂಬರ್ ಗಳ ಪೈಕಿ ೨ ಲಕ್ಷ ೭೮ ಸಾವಿರ ಪೌತಿಖಾತೆ ಬಾಕಿ ಉಳಿದಿದೆ ಅವುಗಳನ್ನು ಅತೀ ಶೀಘ್ರವಾಗಿ ಮುಗಿಸಲು ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

<><><>

ದೇಶದ ಎರಡನೇ ಅತಿ ಉದ್ದದ ತೂಗು ಸೇತುವೆ ಸಿಗಂದೂರು ಸೇತುವೆ ಇದೇ ೧೪ರಂದು ಲೋಕಾರ್ಪಣೆ ಆಗಲಿದೆ. ಶಿವಮೊಗ್ಗದಲ್ಲಿ ಮಾತನಾಡಿದ ಸಂಸದ ಬಿ.ವೈ.ರಾಘವೇಂದ್ರ, ಕೇಂದ್ರ ಭೂಸಾರಿಗೆ ಸಚಿವ ನಿತಿನ್ ಗಡ್ಕರಿ ಸೇತುವೆ ಉದ್ಘಾಟಿಸಲಿದ್ದಾರೆ ಎಂದು ತಿಳಿಸಿದ್ದಾರೆ. ಇಂದಿನಿಂದ ಎರಡನೇ ಹಂತದ ಲೋಡ್ ಟೆಸ್ಟ್ ನಡೆಯಲಿದೆ. ಕೊನೆಯ ಹಂತದ ಕಾರ್ಯ ಬಾಕಿ ಇದೆ ಎಂದು ತಿಳಿಸಿದರು. ಸರ್ಕಾರದ ಆದೇಶದಲ್ಲಿ ಈ ಸೇತುವೆಗೆ ಹೊಳೆಬಾಗಿಲು ಕಳಸವಳ್ಳಿ ಸೇತುವೆ ಎಂದು ಉಲ್ಲೇಖಿಸಲಾಗಿದೆ. ಈ ಸೇತುವೆಗೆ ಸಿಗಂದೂರು ಚೌಡೇಶ್ವರಿ ಸೇತುವೆ ಎಂದು ನಾಮಕರಣ ಮಾಡಬೇಕು. ಈ ಸಂಬಂಧ ರಾಜ್ಯ ಸರ್ಕಾರ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

<><><>

ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬಗಳಿಗೆ ನಗದು ರಹಿತ ಆರೋಗ್ಯ ಸೇವೆ ನೀಡುವ ಜ್ಯೋತಿ ಸಂಜೀವಿನಿ ಯೋಜನೆ ಮುಂದಿನ ತಿಂಗಳಿನಿಂದ ಜಾರಿಗೆ ಬರಲಿದೆ ಎಂದು ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷ ಸಿ.ಎಸ್.ಷಡಕ್ಷರಿ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಹಮ್ಮಿಕೊಂಡಿದ್ದ ಪ್ರತಿಭಾನ್ವಿತ ಎಸ್ಎಸ್ ಎಲ್ ಸಿ, ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ೧೦೯ ವರ್ಷಗಳ ಇತಿಹಾಸ ಹೊಂದಿರುವ ಸಂಘ ಹಲವು

ಬೇಡಿಕೆಗಳನ್ನು ಈಡೇರಿಸಿವೆ. ಇನ್ನೂ ಹಲವು ಬೇಡಿಕೆಗಳು ಬಾಕಿ ಇದ್ದು, ಹಳೆ ಪಿಂಚಣಿ ಯೋಜನೆ ಜಾರಿಯಾಗಬೇಕಿದೆ ಎಂದು ಹೇಳಿದ್ದಾರೆ.

<><><>

ರಾಜ್ಯದಲ್ಲಿ ಬಸ್ಸಿನ ಕೊರತೆ ನೀಗಿಸಲು ಪ್ರಧಾನ ಮಂತ್ರಿ ಇ ಬಸ್ ಯೋಜನೆಯನ್ನು ಕೇಂದ್ರ ಸಚಿವ ಕುಮಾರಸ್ವಾಮಿ ಬೆಂಗಳೂರಿಗೆ ಈಗಾಗಲೇ ಕಲ್ಪಿಸಿದ್ದಾರೆ. ಹುಬ್ಬಳ್ಳಿ ಧಾರವಾಡ ಸೇರಿ ಉತ್ತರ ಕರ್ನಾಟಕದ ನಗರಗಳಿಗೂ ಬಸ್ ವಿಸ್ತರಿಸಲು ಪತ್ರ ಬರೆಯಲಾಗಿದೆ ಎಂದು ಅವರು ತಿಳಿಸಿದ್ದಾರೆ.

**ಧ್ವನಿ : ಶಾಸಕ ಅರವಿಂದ ಬೆಲ್ಲದ (೨೯ ಸೆಕೆಂಡುಗಳು)**

ಇದೇ ವೇಳೆ, ಲಿಂಗಾಯತ ಪಂಚಮಸಾಲಿ ಸಮಾಜಕ್ಕೆ ಅನ್ಯಾಯವಾಗುತ್ತಿದ್ದು ರಾಜ್ಯಸರ್ಕಾರ ಸ್ಪಂದಿಸುವಂತೆ ಮನವಿ ಮಾಡಿದ್ದಾರೆ.

<><><>

ರಾಜ್ಯ ಸರ್ಕಾರದ ಎರಡು ವರ್ಷಗಳ ಅಭಿವೃದ್ಧಿ ಸಾಧನೆ ಹಾಗೂ ಪಂಚ ಗ್ಯಾರಂಟಿ ಯೋಜನೆ ಬಿಂಬಿಸುವ ಮಾಹಿತಿ ಒಳಗೊಂಡ ವಸ್ತು ಪ್ರದರ್ಶನಕ್ಕೆ ಮಡಿಕೇರಿಯಲ್ಲಿ ಚಾಲನೆ ದೊರೆತಿದೆ. ಗ್ಯಾರಂಟಿ ಯೋಜನೆ ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷರಾದ ತೀತೀರ ಧರ್ಮಜ ಉತ್ತಪ್ಪ ಮತ್ತು ಜಿಲ್ಲಾಧಿಕಾರಿ ವೆಂಕಟ್ ರಾಜಾ ವಸ್ತು ಪ್ರದಶನಕ್ಕೆ ಚಾಲನೆ ನೀಡಿದರು.

<><><>

ದೇಶಾದ್ಯಂತ ಇಂದು ಹಸಿರು ಕ್ರಾಂತಿಯ ಹರಿಕಾರ ಮಾಜಿ ಉಪ ಪ್ರಧಾನಿ ಡಾ.ಬಾಬು ಜಗಜೀವನ್ ರಾಂ ಅವರ ೩೮ನೇ ಪುಣ್ಯಸ್ಮರಣೆ ಆಚರಿಸಲಾಯಿತು. ಡಾ.ಬಾಬು ಜಗಜೀವನ ರಾಮ್ ಅವರು ದೇಶಕ್ಕೆ ನೀಡಿರುವ ಕೊಡುಗೆ ಅಪಾರ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಮತ್ತು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಡಾ.ಬಾಬು ಜಗಜೀವರಾಂ ಅವರ ೩೯ನೇ ಪುಣ್ಯಸ್ಮರಣೆ ಅಂಗವಾಗಿ ಜಿಲ್ಲಾಧಿಕಾರಿ ಎ.ಬಿ ಬಸವರಾಜು ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು.

<><><>

ಸಂಕ್ಷಿಪ್ತ ಸುದ್ದಿಗಳು

1. ರಾಜ್ಯ ಸರ್ಕಾರದ ಎರಡು ವರ್ಷಗಳ ಅಭಿವೃದ್ಧಿ ಸಾಧನೆ ಹಾಗೂ ಪಂಚ ಗ್ಯಾರಂಟಿ ಯೋಜನೆಗಳನ್ನು ಬಿಂಬಿಸುವ ವಸ್ತು ಪ್ರದರ್ಶನಕ್ಕೆ ಕೋಲಾರ ಜಿಲ್ಲಾಧಿಕಾರಿ ಎಂ.ಆರ್. ರವಿ ಚಾಲನೆ ನೀಡಿದರು.
2. ಪತ್ರಕರ್ತರ ಸುದ್ದಿಗಳು ಸ್ಪರ್ಧಾತ್ಮಕ ಪರೀಕ್ಷೆಗಳ ಆಕರಗಳು ಎಂದು ವಿಜಯನಗರ ಜಿಲ್ಲಾಧಿಕಾರಿ ಎಂ ಎಸ್ ದಿವಾಕರ್ ಅಭಿಪ್ರಾಯಪಟ್ಟಿದ್ದಾರೆ. ಜಿಲ್ಲಾಡಳಿತಕ್ಕೆ ಪತ್ರಕರ್ತರು ಕಣ್ಣು ಕಿವಿ ಇದ್ದಂತೆ ಎಂದು ತಿಳಿಸಿದ್ದಾರೆ.

3. ಹಾಸನ ಜಿಲ್ಲೆಯ ಚನ್ನರಾಯಪಟ್ಟಣದಲ್ಲಿ ನೂತನವಾಗಿ ನಿರ್ಮಾಣ ಮಾಡಿರುವ ಪ್ರವಾಸಿ ಮಂದಿರದ ಹೆಚ್ಚುವರಿ ಹಾಗೂ ನವೀಕೃತ ಕಟ್ಟಡಗಳನ್ನು ಜಿಲ್ಲಾ ಉಸ್ತುವಾರಿ ಸಚಿವ ಕೆ. ಎನ್. ರಾಜಣ್ಣ ಉದ್ಘಾಟಿಸಿದರು.

<><><><>

ಕರಾವಳಿ ಕರ್ನಾಟಕದಾದ್ಯಂತ ನೈಋತ್ಯ ಮಾನ್ಸೂನ್ ಸಕ್ರಿಯವಾಗಿತ್ತು. ರಾಜ್ಯದ ಒಳನಾಡಿನಲ್ಲಿ ಸಾಮಾನ್ಯವಾಗಿತ್ತು. ಕರಾವಳಿ ಕರ್ನಾಟಕದ ಹೆಚ್ಚಿನ ಸ್ಥಳಗಳಲ್ಲಿ, ದಕ್ಷಿಣ ಕರ್ನಾಟಕದ ಅನೇಕ ಕಡೆ ಮತ್ತು ಉತ್ತರ ಕರ್ನಾಟಕದ ಕೆಲವು ಭಾಗಗಳಲ್ಲಿ ಮಳೆಯಾಗಿದೆ. ದಕ್ಷಿಣ ಕನ್ನಡ, ಉತ್ತರ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಒಂದು ಅಥವಾ ಎರಡು ಸ್ಥಳಗಳಲ್ಲಿ ನಿರಂತರ ಗಾಳಿಯೊಂದಿಗೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಇದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>